ಓ.ಎಸ್. 339/2017
ಪಿ.ಡಬ್ಲ್ಯೂ-1

ದಿನಾಂಕಃ **15.10.2025**

ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಕೆ.ವಿ.ಎಸ್.ಕೆ. ವಕೀಲರಿಂದಃ

ನಾನು ನನ್ನ ಮುಖ್ಯ ವಿಚಾರಣೆ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳನ್ನು ತಿಳಿದುಕೊಂಡು ಸರಿ ಇರುತ್ತದೆಂದು ಎಂದು ಒಪ್ಪಿ ಸಹಿ ಮಾಡಿರುತ್ತೇನೆ.

ವಾದಿ ನನಗೆ ಬರೆದುಕೊಟ್ಟಿರುವಂತಹ ವಿಶೇಷ ಅಧಿಕಾರ ಪತ್ರವನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-**1** ಎಂದು ಗುರುತಿಸಲಾಯಿತು. ವಾದಿ ಕುಟುಂಬಕ್ಕೆ ಸಂಬಂಧಿಸಿದ ವಂಶಾವಳಿಯ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-**2** ಎಂದು ಗುರುತಿಸಲಾಯಿತು. ಕಾಟಗಾನಹಟ್ಟಿ ಗ್ರಾಮದ ಆಸ್ತಿ ನಂಬರ್ 414, 415 ಮತ್ತು 420 ಕ್ಕೆ ಸಂಬಂಧಿಸಿದ 5 ತೆರಿಗೆ ನಿರ್ಧರಣಾ ಪ್ರತಿಗಳನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ಕ್ರಮವಾಗಿ ನಿಪಿ-**3** ರಿಂದ **7** ಎಂದು ಗುರುತಿಸಲಾಯಿತು. ದಿಃ14.09.2017 ರಂದು ಮನೆ ಕಟ್ಟಲು ನೀಡಿದಂತಹ ಪರವಾನಿಗೆಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-**8** ಎಂದು ಗುರುತಿಸಲಾಯಿತು. ಒಂದು ಕಂದಾಯ ಪಾವತಿ ರಶೀದಿಯನ್ನು ಹಾಜರುಪಡಿಸಿರುತ್ತೇನೆ ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-**9** ಎಂದು ಗುರುತಿಸಲಾಯಿತು. ಮನೆ ಮಂಜೂರಾತಿ ಮತ್ತು ಕಾಮಗಾರಿ ಆದೇಶ ಪ್ರತಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-**10** ಎಂದು ಗುರುತಿಸಲಾಯಿತು. ದಾವಾ ಸ್ವತ್ತಿಗೆ ಸಂಬಂಧಿಸಿದ ನಮೂನೆ ನಂ.9 ನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-**11** ಎಂದು ಗುರುತಿಸಲಾಯಿತು. ದಾವಾ ಸ್ವತ್ತಿಗೆ ಸಂಬಂಧಿಸಿದ ನಕಾಶೆಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-**12** ಎಂದು

ಗುರುತಿಸಲಾಯಿತು. ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ಓ.ಎಸ್. ನಂ. 474/2016 ರಲ್ಲಿ ನ್ಯಾಯಾಲಯದ ಆಯುಕ್ತರು ಹಾಜರು ಪಡಿಸಿರುವಂತಹ ನಕಾಶೆಯ ದೃಢೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-**13** ಎಂದು ಗುರುತಿಸಲಾಯಿತು. ಎಂ.ಎ. ನಂ. 40/2017 ರಲ್ಲಿನ ಆದೇಶದ ದೃಢೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-**14** ಎಂದು ಗುರುತಿಸಲಾಯಿತು. 8 ಕಂದಾಯ ಪಾವತಿ ರಶೀದಿಗಳನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ಕ್ರಮವಾಗಿ ನಿಪಿ-**15** ರಿಂದ **22** ಎಂದು ಗುರುತಿಸಲಾಯಿತು. ಸುಜಾತರವರ ಬ್ಯಾಂಕಿನ ವಹಿವಾಟಿನ ಪ್ರತಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-23 ಎಂದು ಗುರುತಿಸಲಾಯಿತು.

**(ಪ್ರತಿವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಪಾಟೀ ಸವಾಲನ್ನು ಮುಂದೂಡಲಾಯಿತು.)**

(ತೆರೆದ ನ್ಯಾಯಾಲಯಾದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಸಹಿ/-
(ಶ್ರೀ ಅಮರನಾಥ ಬಿ.ಎನ್)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಮಧುಗಿರಿ